ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳ ಬಗ್ಗೆ

ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

325 (315) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ; ಇಲ್ಲಿ ಕಲಿಯುತ್ತಿರುವ ಮಕ್ಕಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದ ಅಂಗನವಾಡಿ ಕೇಂದ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅಂಗನವಾಡಿ ಕಾರ್ಯಕರ್ತರ ಸಂಖ್ಯೆ ಎಷ್ಟು ;(ಜಿಲ್ಲಾವಾರು ವಿವರ ನೀಡುವುದು)

(ಇ) ಅಂಗನವಾಡಿ ಕಾರ್ಯಕರ್ತೆಯರಿಗೆ ಸರ್ಕಾರ ನೀಡುತ್ತಿರುವ ಗೌರವಧನ ಎಷ್ಟು ; ಗೌರವಧನದ ಜೊತೆಗೆ ಇನ್ನಿತರೆ ಸೌಲಭ್ಯಗಳು ಯಾವುವು ;

(ಈ) ಅಂಗನವಾಡಿ ಕಾರ್ಯಕರ್ತೆಯರಿಗೆ ಗೌರವಧನ ಹೆಚ್ಚಳ ಮಾಡುವ ಕುರಿತು ಸರ್ಕಾರದ ನಿಲುವೇನು ;

(ಉ) ಶಿವಮೊಗ್ಗ ಹಾಗೂ ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕಿನ ಅಂಗನವಾಡಿ ಮತ್ತು ಮಿನಿ ಅಂಗನವಾಡಿಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಎಷ್ಟು; ಅಂಗನವಾಡಿಗಳಿಗೆ ಸ್ವಂತ ಕಟ್ಟಡವಿರುತ್ತದೆ ; ಸ್ವಂತ ಕಟ್ಟಡವಿಲ್ಲದ ಅಂಗನವಾಡಿಗೆ ಹೊಸ ಕಟ್ಟಡಗಳನ್ನು ಕಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?